ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 333 ಸೇಶಿಕಾ 2016

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ. 06.04.2017

## ಅಧಿಸೂಚನೆ

ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ಹೈದ್ರಾಬಾದ್ – ಕರ್ನಾಟಕ ಪ್ರದೇಶದ ಮೀಸಲಾತಿಯನ್ವಯ ಸ್ಥಳೀಯ ವೃಂದಕ್ಕೆ ಮೀಸಲಾದ 07 ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಗ್ರೂಪ್ – ಎ ವೃಂದ (ಕಿರಿಯ ಶ್ರೇಣಿ) ಹುದ್ದೆಗಳಿಗೆ ಕರ್ನಾಟಕ ಲೋಕಾ ಸೇವಾ ಆಯೋಗವು ಅಧಿಸೂಚನೆ ಸಂಖ್ಯೆ PSC 18 RTB 2015 ದಿನಾಂಕ 16.11.2016ರಂದು ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಿರುತ್ತದೆ. ಸದರಿ ಅಂತಿಮ ಆಯ್ಕೆ ಪಟ್ಟಿಯನ್ವಯ ಆಯ್ಕೆಯಾಗಿರುವ ಈ ಕೆಳಕಂಡ ಅಭ್ಯರ್ಥಿಗಳನ್ನು ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಗ್ರೂಪ್ – ಎ (ಕಿರಿಯ ಶ್ರೇಣಿ) ಯ (ವೇತನ ಶ್ರೇಣಿ ರೂ. 28100 – 50100) ಹುದ್ದೆಗಳಿಗೆ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ, ಕರ್ನಾಟಕ ನಾಗರೀಕ ಸೇವಾ (ಪ್ರೊಬೇಷನರ್ಸ್) ನಿಯಮಾವಳಿಗಳು 1977ರ ನಿಯಮ 3ರನ್ವಯ, ತಾತ್ಕಾಲಿಕವಾಗಿ 2 ವರ್ಷಗಳ ಪರೀಕ್ಷಣಾ ಅವಧಿಗೆ ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗೊಳಪಡಿಸಿ ನೇಮಕ ಮಾಡಲಾಗಿದೆ.

| ಕ್ರ.ಸಂ. | ಅಭ್ಯರ್ಥಿಯ ಹೆಸರು ಮತ್ತು ವಿಳಾಸ | ಜನ್ಮ ದಿನಾಂಕ | ಮೀಸಲಾತಿ / ವರ್ಗೀಕರಣ |
|---|---|---|---|
| 1. | ಶ್ರೀ ಎಂ.ಬಸನಗೌಡ,<br>ಎಂ.ವೀರಭದ್ರಗೌಡ,<br>ನಿವೃತ್ತ ಇಂಜಿನಿಯರ್,<br>ಮನೆ ನಂ. 6-1-1111,<br>ಮೆಹಬೂಬ್ ಕಾಲೋನಿ,<br>ಸಿಂಧನೂರು – 584128 | 30.07.1989 | ಸಾಮಾನ್ಯ/3ಬಿ/ಹೈದ್ರಾಬಾದ್ – ಕರ್ನಾಟಕ |
| 2. | ಶ್ರೀ ಆನಂದ<br>ಮನೆ ನಂ. 174, ಬೆಳಮಗಿ,<br>ಆಳಂದ ತಾಲ್ಲೂಕು,<br>ಕಲಬುರಗಿ ಜಿಲ್ಲೆ –585316. | 07.03.1994 | ಸಾಮಾನ್ಯ/3ಬಿ/ಗ್ರಾಮೀಣ/<br>ಹೈದ್ರಾಬಾದ್ – ಕರ್ನಾಟಕ |

| | | | |
|---|---|---|---|
| 3. | ಶ್ರೀ ಶಿವಾನಂದ,<br>ಕಲ್ಲಪ್ಪ ಸಂಗಮೆ, ಗಡಿಕುಶನೂರ,<br>ಔರಾದ್ ತಾಲ್ಲೂಕು, ಬೀದರ್ ಜಿಲ್ಲೆ – 585421. | 04.06.1992 | ಪರಿಶಿಷ್ಟ ಪಂಗಡ / ಹೈದ್ರಾಬಾದ್ – ಕರ್ನಾಟಕ |
| 4. | ಶ್ರೀ ಪ್ರಕಾಶ್,<br>ಭಟಸಾಂಗ್ವಿ, ಭಾಲ್ಕಿ ತಾಲ್ಲೂಕು,<br>ಬೀದರ್ ಜಿಲ್ಲೆ – 585411. | 05.08.1991 | ಪರಿಶಿಷ್ಟ ಜಾತಿ / ಹೈದ್ರಾಬಾದ್ – ಕರ್ನಾಟಕ |
| 5. | ಶ್ರೀ ಪಂಪಾಪತಿ ವಿರೂಪಾಪುರ<br>ಮನೆ ನಂ. 151, ಬೀರಪ್ಪ ದೇವಸ್ಥಾನದ ಹತ್ತಿರ, ಕುರುಬರ ಓಣಿ, ಕಲ್ಲುಕಂಬ, ಬಳ್ಳಾರಿ ಜಿಲ್ಲೆ – 583113. | 19.06.1991 | 2ಎ / ಹೈದ್ರಾಬಾದ್ – ಕರ್ನಾಟಕ |
| 6. | ಶ್ರೀ ರಾಜಕುಮಾರ,<br>ಫ್ಲಾಟ್ ನಂ.8, ಶಾಂತಿಧಾಮ ನಿಲಯ, ಮಣಿಕೇಶ್ವರಿ ಕಾಲೋನಿ, ಬ್ರಹ್ಮಪುರ, ಕಲಬುರಗಿ–585103. | 20.06.1986 | ಕೆಟಗರಿ–1 / ಹೈದ್ರಾಬಾದ್ – ಕರ್ನಾಟಕ |
| 7. | ಕುಮಾರಿ ಮೇನಕಾ ಪಟೇಲ್,<br>ಶ್ರೀ ಮಗಶಕ್ತಿ ಕಿರಾಣಿ ಮತ್ತು ಜನರಲ್ ಸ್ಟೋರ್, ಶಿರವಾರ ಮುಖ್ಯ ರಸ್ತೆ, ಮಾನ್ವಿ ತಾಲ್ಲೂಕು, ರಾಯಚೂರು ಜಿಲ್ಲೆ – 584129. | 19.05.1993 | ಸಾಮಾನ್ಯ / ಮಹಿಳೆ/ ಹೈದ್ರಾಬಾದ್ – ಕರ್ನಾಟಕ |

<u>ನೇಮಕಾತಿಯ ಷರತ್ತು ಮತ್ತು ನಿಬಂಧನೆಗಳು:–</u>

1. ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಾವಳಿಗಳು 1977ರ ನಿಯಮ 18 ರನ್ವಯ, ಈ ನೇಮಕಾತಿಯ ಆದೇಶ ದಿನಾಂಕದಿಂದ 15 ದಿನಗೊಳಗಾಗಿ ಅಭ್ಯರ್ಥಿಗಳು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ (ಉಪ ಕಾರ್ಯದರ್ಶಿ, ಆಡಳಿತ ರವರ ಬಳಿ) ತಪ್ಪದೇ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳತಕ್ಕದ್ದು, ನಿಗಧಿತ ದಿನಾಂಕದೊಳಗಾಗಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳದಿದ್ದಲ್ಲಿ ಅದೇ ನಿಯಮಾವಳಿಗಳ ನಿಯಮ 18(3) ರನ್ವಯ ನೇಮಕಾತಿಗೆ ಅನರ್ಹರಾಗುತ್ತಾರೆ.
2. ಸದರಿ ನೇಮಕಾತಿಯು ತಾತ್ಕಾಲಿಕವಾಗಿದ್ದು, ಕರ್ನಾಟಕ ನಾಗರೀಕ ಸೇವಾ (ಪರೀಕ್ಷಾರ್ಥ) ನಿಯಮಾವಳಿಗಳು 1977ರ ನಿಯಮ 3ರನ್ವಯ 2 ವರ್ಷಗಳ ಖಾಯಂ ಪೂರ್ವ ಪರೀಕ್ಷಾರ್ಥ ಸೇವಾ ಅವಧಿಗೆ ಒಳಪಟ್ಟಿರುತ್ತದೆ. ಖಾಯಂ ಪೂರ್ವ ಅವಧಿಯನ್ನು ತೃಪ್ತಿಕರವಾಗಿ ಪೂರ್ಣಗೊಳಿಸತಕ್ಕದ್ದು.

3. ಸದರಿ ಅಭ್ಯರ್ಥಿಗಳ ನೇಮಕಾತಿಯು ಮತ್ತು ಸೇವಾ ಸೌಲಭ್ಯಗಳು ಆಗಿಂದ್ದಾಗ್ಗೆ ಜಾರಿಯಲ್ಲಿರುವ ಸರ್ಕಾರದ ನಿಯಮಗಳು/ಆದೇಶಗಳ ಅಧೀನಕ್ಕೊಳಪಟ್ಟಿರುತ್ತದೆ.

4. ಈ ಮೇಲ್ಕಂಡ ಅಭ್ಯರ್ಥಿಗಳ ಸಿಂಧುತ್ವ ಪ್ರಮಾಣ ಪತ್ರ / ಪೊಲೀಸ್ ವರದಿ / ವೈದ್ಯಕೀಯ ಪ್ರಮಾಣ ಪತ್ರ / ವಿದ್ಯಾರ್ಹತೆಯ ಪ್ರಮಾಣ ಪತ್ರ / ಹೈದ್ರಾಬಾದ್ ಕರ್ನಾಟಕ 371(ಜೆ) ಪ್ರಮಾಣ ಪತ್ರ ಹಾಗೂ ಅಂಕಪಟ್ಟಿಗಳ ನೈಜತೆ ಪ್ರಮಾಣ ಪತ್ರ ಸಲ್ಲಿಸುವ / ಪರಿಶೀಲಿಸುವ ಷರತ್ತಿಗೊಳಪಟ್ಟು ನೇಮಕಾತಿ ಆದೇಶ ನೀಡಲಾಗಿರುತ್ತದೆ. ಸದರಿ ದಾಖಲಾತಿಗಳು / ಪ್ರಮಾಣ ಪತ್ರಗಳನ್ನು ಸಲ್ಲಿಸಲು ವಿಫಲರಾದಲ್ಲಿ ನೇಮಕಾತಿ ಆದೇಶವನ್ನು ರದ್ದುಪಡಿಸಲಾಗುವುದು.

5. ಕರ್ನಾಟಕ ನಾಗರೀಕ ಸೇವಾ (ಕನ್ನಡ ಭಾಷಾ ಪರೀಕ್ಷೆ) 1974 ರನ್ವಯ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹುದ್ದೆಗೆ ನಿಗಧಿಪಡಿಸಿರುವ ಎಲ್ಲಾ ಇಲಾಖಾ ಪರೀಕ್ಷೆಗಳನ್ನು ಹಾಗೂ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಗಳನ್ನು ಪಾಸು ಮಾಡತಕ್ಕದ್ದು.

6. ನೇಮಕಾತಿ ಮಾಡಿದ ಸ್ಥಳಕ್ಕೆ ಪ್ರಯಾಣಿಸಲು ಯಾವುದೇ ಪ್ರಯಾಣ ಭತ್ಯೆ ಮತ್ತು ದಿನಭತ್ಯೆ ನೀಡಲಾಗುವುದಿಲ್ಲ.

7. ಕರ್ತವ್ಯಕ್ಕೆ ಹಾಜರಾಗುವ ಸಂದರ್ಭದಲ್ಲಿ ಮೂಲ ಜಾತಿ ಪ್ರಮಾಣ ಪತ್ರ, ವಾರ್ಷಿಕ ವರಮಾನ ಪ್ರಮಾಣ ಪತ್ರ, ಶೈಕ್ಷಣಿಕ ವಿದ್ಯಾರ್ಹತೆಯ ಮೂಲ ಪ್ರಮಾಣ ಪತ್ರಗಳು, ಗ್ರಾಮೀಣ ಪ್ರದೇಶಕ್ಕೆ ಸೇರಿದ ಪ್ರಮಾಣ ಪತ್ರಗಳು ಹಾಗೂ ಅಭ್ಯರ್ಥಿಯ ಕುಟುಂಬಕ್ಕೆ ಸಂಬಂಧಿಸಿದಂತೆ ಸ್ಥಿರ ಮತ್ತು ಚರಾಸ್ತಿಗಳ ವಿವರ, ಸ್ವಗ್ರಾಮದ ಬಗ್ಗೆ ಮಾಹಿತಿ / ದಾಖಲಾತಿ, ಪಾಸ್‌ಪೋರ್ಟ್ ಅಳತೆಯ 2 ಇತ್ತೀಚಿನ ಭಾವಚಿತ್ರ ಹಾಗೂ ಇತರೆ ದಾಖಲಾತಿಗಳನ್ನು ಹಾಜರುಪಡಿಸತಕ್ಕದ್ದು.

8. ಅಭ್ಯರ್ಥಿಯು ಸಲ್ಲಿಸುವ ಮೂಲ ದಾಖಲಾತಿ / ಪ್ರಮಾಣ ಪತ್ರಗಳಲ್ಲಿ ತಪ್ಪು ಮಾಹಿತಿ ಅಥವಾ ಸುಳ್ಳು ಎಂದು ಕಂಡು ಬಂದಲ್ಲಿ ಅಂತಹವರ ನೇಮಕಾತಿ / ಆಯ್ಕೆಯನ್ನು ರದ್ದುಪಡಿಸಲಾಗುವುದು. ಸರ್ಕಾರದ ಸುತ್ತೋಲೆ ಸಂಖ್ಯೆ: ಕಂಇ/216/ಒಎಸ್‌ಸಿ/2013 ದಿ: 22-08-2013 ರಲ್ಲಿ ಸೂಚಿಸಲಾಗಿರುವಂತೆ, ಅಂತಹ ಅಭ್ಯರ್ಥಿಯ ವಿರುದ್ಧ ಭಾರತೀಯ ದಂಡ ಸಂಹಿತೆಯನ್ವಯ ಹಾಗೂ ಕೆ.ಸಿ.ಎಸ್. (ಸಿಸಿಎ) ನಿಯಮಗಳು 1957ರ ಅಡಿಯಲ್ಲಿ ಕ್ರಮ ಕೈಗೊಳ್ಳಲಾಗುವುದು.

9. ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರಲ್ಲಿನ ನಿಯಮ 28ರ ರೀತ್ಯಾ ಹಾಗೂ ವಿಧಿಸಿರುವ ಷರತ್ತುಗಳಿಗೆ ಬದ್ಧರಾಗಿರುವ ಬಗ್ಗೆ ಪ್ರಮಾಣ ಪತ್ರವನ್ನು ಕರ್ತವ್ಯಕ್ಕೆ ಹಾಜರಾಗುವ ಸಮಯದಲ್ಲಿ ಸಲ್ಲಿಸತಕ್ಕದ್ದು.

10. ಅಭ್ಯರ್ಥಿಯು ಸೇವೆಗೆ ಹಾಜರಾಗಿ ಭಾರತ ಸಂವಿಧಾನದ ರೀತ್ಯಾ "ನಿಷ್ಠೆಯ ಪ್ರಮಾಣ ವಚನ ಸ್ವೀಕರಿಸುವುದು".

11. ಸರ್ಕಾರದ ಆದೇಶ ಸಂಖ್ಯೆ ಎಫ್‌ಡಿ(ವಿಶೇಷ) 04 ಪಿಇಟಿ 2005 ದಿನಾಂಕ 31.03.2006ರನ್ವಯ ಅಭ್ಯರ್ಥಿಯು ಹೊಸ ನಿವೃತ್ತಿ ವೇತನ ಯೋಜನೆಗೆ (ಎನ್.ಪಿ.ಎಸ್) ಒಳಪಟ್ಟಿರುತ್ತಾರೆ.

12. ಅಭ್ಯರ್ಥಿಗಳು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966 ಹಾಗೂ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ಹಾಗೂ ಕಾಲಕಾಲಕ್ಕೆ ಸರ್ಕಾರದಿಂದ ಹೊರಡಿಸಲಾಗುವ ಇತರೆ ನಿಯಮಾವಳಿಗಳಿಗೆ ಬದ್ಧರಾಗಿರುತ್ತಾರೆ.

13. ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಇಲಾಖಾ ಮುಖ್ಯಸ್ಥರ ಮೂಲಕ ಅರ್ಜಿ ಸಲ್ಲಿಸಿದ ಬಗ್ಗೆ ಇಲಾಖಾಧಿಕಾರಿಗಳು ನೀಡಿರುವ ನಿರಾಕ್ಷೇಪಣಾ ಪತ್ರ, ಯಾವುದೇ ಇಲಾಖಾ ವಿಚಾರಣೆ / ಕ್ರಿಮಿನಲ್ ಮೊಕದ್ದಮೆ ಬಾಕಿ ಇಲ್ಲದಿರುವ / ಹೂಡಲು ಉದ್ದೇಶಿಸದಿರುವ ಬಗ್ಗೆ ಮತ್ತು ಇಲಾಖೆಯಿಂದ ಬಿಡುಗಡೆಯಾಗಿರುವ ಬಗ್ಗೆ ದೃಢೀಕರಣ ಪತ್ರ ಹಾಜರುಪಡಿಸತಕ್ಕದ್ದು.

14. ಮೇಲಾಧಿಕಾರಿಗಳ ಹಾಗೂ ಸರ್ಕಾರಿ ಆದೇಶಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

15. ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತೆ) ನಿಯಮಾವಳಿಗಳು 1957ರ ನಿಯಮ 5(1)(ಎ) ರನ್ವಯ ಅಭ್ಯರ್ಥಿಗಳ ಜೇಷ್ಠತೆಯನ್ನು ಕರ್ನಾಟಕ ಲೋಕ ಸೇವಾ ಆಯೋಗವು ನೀಡಿರುವ ಅಂತಿಮ ಆಯ್ಕೆ ಪಟ್ಟಿಯ ಕ್ರಮಾಂಕದ ಆಧಾರದ ಮೇಲೆ ಪರಿಗಣಿಸಲಾಗುವುದು.

16. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವತಿಯಿಂದ ಆಯೋಜಿಸುವ ತರಬೇತಿಗೆ ಕಡ್ಡಾಯವಾಗಿ ಹಾಜರಾಗತಕ್ಕದ್ದು ಹಾಗೂ ಅಭ್ಯರ್ಥಿಗಳು ಪಡೆದ ತರಬೇತಿಯ ಮಾಸಿಕ ವರದಿಯನ್ನು ಇಲಾಖೆಗೆ ಸಲ್ಲಿಸುವುದು. ತರಬೇತಿಗೆ ಗೈರು ಹಾಜರಾದಲ್ಲಿ ಅಶಿಸ್ತು ಎಂದು ಪರಿಗಣಿಸಿ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್.ರಂಗನಗೌಡ) 06/04/2017
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ) / (ಇ &ಆರ್‌ಎಸ್‌ಎ) /(ಎ&ಇ) ರವರ ಕಾರ್ಯದರ್ಶಿ, ಕರ್ನಾಟಕ ಹೊಸ ಕಟ್ಟಡ, ಆಡಿಟ್ ಭವನ, ಅಂಚೆಪೆಟ್ಟಿಗೆ ಸಂಖ್ಯೆ 5398, ಬೆಂಗಳೂರು -01.

2. ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನ ಸೌಧ, ಬೆಂಗಳೂರು.
3. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಪಾರ್ಕ್‌ಹೌಸ್, ಬೆಂಗಳೂರು-01.
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ಸರ್ಕಲ್, ಬೆಂಗಳೂರು.
5. ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಬೆಂಗಳೂರು.
6. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಬೆಂಗಳೂರು.
7. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಬೆಂಗಳೂರು.
8. ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
9. ಮುಖ್ಯಸ್ಥರು, ಅಬ್ದುಲ್ ನಜೀರ್‌ಸಾಬ್ ರಾಜ್ಯ ಗ್ರಾಮೀಣ ಅಭಿವೃದ್ಧಿ ತರಬೇತಿ ಕೇಂದ್ರ, ಲಲಿತ ಮಹಲ್ ರಸ್ತೆ, ಮೈಸೂರು.
10. ಸರ್ಕಾರದ ವಿಶೇಷ ಕಾರ್ಯದರ್ಶಿ (ಸೇವಾ ನಿಯಮಗಳು), ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನ ಸೌಧ, ಬೆಂಗಳೂರು.
11. ಸರ್ಕಾರದ ಉಪ ಕಾರ್ಯದರ್ಶಿ(ಸೇವೆಗಳು), ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನ ಸೌಧ, ಬೆಂಗಳೂರು.
12. ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಗೋಪುರ, ಪೋಡಿಯಂ ಬ್ಲಾಕ್, ಬೆಂಗಳೂರು.
13. ನಿರ್ದೇಶಕರು, ಕರ್ನಾಟಕ ಸರ್ಕಾರ ವಿಮಾ ಇಲಾಖೆ, ವಿಶ್ವೇಶ್ವರಯ್ಯ ಗೋಪುರ, ಪೋಡಿಯಂ ಬ್ಲಾಕ್, ಬೆಂಗಳೂರು.
14. ಸರ್ಕಾರದ ಉಪ ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಪಾರ್ಕ್‌ಹೌಸ್, ಬೆಂಗಳೂರು-01.
15. ಸರ್ಕಾರದ ಅಧೀನ ಕಾರ್ಯದರ್ಶಿ (ಕೆ.ಪಿ.ಎಸ್.ಸಿ. ಶಾಖೆ), ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನ ಸೌಧ, ಬೆಂಗಳೂರು.
16. ರಾಜ್ಯ ಹುಜೂರ್ ಖಜಾನೆ, ಕೆ.ಆರ್. ಸರ್ಕಲ್, ಬೆಂಗಳೂರು.
17. ಸಂಬಂಧಪಟ್ಟ ಅಭ್ಯರ್ಥಿಗಳಿಗೆ – ನೋಂದಾಯಿತ ಅಂಚೆ / ಸ್ವೀಕೃತಿ ಬಾಕಿ ಮೂಲಕ.
18. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
19. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಉಪ ಕಾರ್ಯದರ್ಶಿ (ಆಡಳಿತ) ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
20. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ರಾಜ್ ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಲುವಾಗಿ.
21. ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.